+3

ಕರ್ನಾಟಕ ಸರ್ಕಾರ

ಸಂಖ್ಯೆ. ನಅಇ 118 ಬೆಂರೂಪ್ರಾ 2003

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 3.3.2006.

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ
ನಂ ...3402.....
ದಿನಾಂಕ 04-03-06
ಬೆಂಗಳೂರು.

ಅಧಿಸೂಚನೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 (1963 ರ ಕರ್ನಾಟಕ ಕಾಯ್ದೆ ಸಂಖ್ಯೆ. 11) ರ 4ಎ ಪ್ರಕರಣದ (1ನೇ) ಪ್ರಕರಣದ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಕರ್ನಾಟಕ ಸರ್ಕಾರವು ಅನುಬಂಧ–I ರಲ್ಲಿ ನಮೂದಿಸಿರುವ ಬೆಂಗಳೂರು (ಗ್ರಾಮಾಂತರ) ಜಿಲ್ಲೆ, ಹೊಸಕೋಟೆ ತಾಲ್ಲೂಕಿನ ಹೊಸಕೋಟೆ ಪಟ್ಟಣ ಸೇರಿದಂತೆ ಎಲ್ಲಾ ಗ್ರಾಮಗಳೂ ಹಾಗೂ ಬೆಂಗಳೂರು (ನಗರ) ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕಿನ ಬಿದರಹಳ್ಳಿ ಹೋಬಳಿಯಲ್ಲಿ ಬಿ.ಡಿ.ಎ. ವ್ಯಾಪ್ತಿಯಲ್ಲಿ ಬರುವ ಗ್ರಾಮಗಳನ್ನು ಹೊರತುಪಡಿಸಿ ಅನುಬಂಧ–1 ರಲ್ಲಿ ಹೇಳಿರುವ .ಉಳಿದ 16 ಗ್ರಾಮಗಳನ್ನು APZ-4 ಕ್ಕೆ ಸೇರಿಸಿಕೊಂಡು ಹೊಸಕೋಟೆ ಸ್ಥಳೀಯ ಯೋಜನಾ ಪ್ರದೇಶವನ್ನು ದಿನಾಂಕ: 2.3.2006 ರಿಂದ ಜಾರಿಗೆ ಬರುವಂತೆ ಈ ಮೂಲಕ ಘೋಷಿಸಿದೆ.

ಈ ಪ್ರದೇಶವನ್ನು "ಹೊಸಕೋಟೆ ಸ್ಥಳೀಯ ಯೋಜನಾ ಪ್ರದೇಶ" ಎಂದು ಕರೆಯಲಾಗಿದೆ. ಸದರಿ ಸ್ಥಳೀಯ ಯೋಜನಾ ಪ್ರದೇಶದ ಎಲ್ಲೆಯನ್ನು ಅನುಬಂಧ–II ರಲ್ಲಿ ನಮೂದಿಸಲಾಗಿದೆ.

1. Pl place it on our website
2 Also, pl. put on file.
04/3/06

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
3/3/06
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು (1) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು ಇವರಿಗೆ 50 ಪ್ರತಿಗಳನ್ನು ಹಾಗೂ (2) ನಗರಾಭಿವೃದ್ಧಿ ಇಲಾಖೆಗೆ 50 ಪ್ರತಿಗಳನ್ನು ಕಳುಹಿಸಲು ಕೋರಲಾಗಿದೆ.

ಪ್ರತಿಯನ್ನು:

೧. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
೨. ಜಿಲ್ಲಾಧಿಕಾರಿಗಳು, ಬೆಂಗಳೂರು (ನಗರ) (ಗ್ರಾಮಾಂತರ) ಜಿಲ್ಲೆ, ಬೆಂಗಳೂರು.
೩. ನಗರ ಯೋಜನಾ ನಿರ್ದೇಶಕರು, ಬೆಂಗಳೂರು.
೪. ಉಪ ನೋಂದಣಾಧಿಕಾರಿಗಳು, ಹೊಸಕೋಟೆ ತಾಲ್ಲೂಕು, ಹೊಸಕೋಟೆ.
೫. ತಹಸೀಲ್ದಾರ್, ಹೊಸಕೋಟೆ ತಾಲ್ಲೂಕು, ಹೊಸಕೋಟೆ.
೬. ಮುಖ್ಯಾಧಿಕಾರಿಗಳು, ಪುರಸಭೆ, ಹೊಸಕೋಟೆ.
೭. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.